ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ
SAMYUKTA KARNATAKA
ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

### ಗುರುವಂದನೆ: ಅಕ್ಷರ ತೋರಣ ಎಂಬ ಅಭಿನಂದನ ಗ್ರಂಥ ಲೋಕಾರ್ಪಣೆ। ಗುರು ಶಿಷ್ಯರ ಮಹಾಸಂಗಮ

# ಉತ್ತಮ ತಾಯಿ ನೂರು ಜನ ಶಿಕ್ಷಕರಿಗೆ ಸಮ: ಹೊರಟ್ಟಿ

**ಆಲಮಟ್ಟಿ:** ಇಲ್ಲಿನ ಸರಕಾರಿ ಶಾಲೆಯ ಹಳೆಯ ವಿದ್ಯಾರ್ಥಿಗಳು ತಮ್ಮ ಶಾಲೆಯ 60ನೆಯ ವರ್ಷಾಚರಣೆಯ ಸಂದರ್ಭದಲ್ಲಿ ಕಲಿತ ಶಾಲೆ ಅಕ್ಷರ ತೋರಣ ಎಂಬ ಅಭಿನಂದನ ಗ್ರಂಥವನ್ನು ಅರ್ಪಿಸಿರುವುದು ಇಡೀ ರಾಜ್ಯಕ್ಕೆ ಮಾದರಿ ಕೆಲಸವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಬಣ್ಣಿಸಿದರು.

ಇಲ್ಲಿನ ಸಮುದಾಯ ಭವನದಲ್ಲಿ ಕರ್ನಾಟಕ ಗಾಂಧಿ ಮಂಜಪ್ಪ ಹರ್ಡೇಕರ ಪ್ರೇರಿತ ಎಂಪಿಎಸ್ ಮತ್ತು ಎಂಎಚ್‌ಎ. ಶಾಲೆಗಳ ಹಳೆಯ ವಿದ್ಯಾರ್ಥಿಗಳ ಬಳಗದಿಂದ ಹಮ್ಮಿಕೊಂಡ 'ಕಲಿತ ಶಾಲೆಗೆ ಅಕ್ಷರ ತೋರಣ' ಹಾಗೂ ಗುರು ಶಿಷ್ಯರ ಮಹಾಸಂಗಮ ಕಾರ್ಯಕ್ರಮದಲ್ಲಿ ಹುತ್ತಾರ ಗ್ರಂಥ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಹುಟ್ಟಿದ ಊರು, ಹೆತ್ತ ತಂದೆ ತಾಯಿ, ಕಲಿತ ಶಾಲೆ, ಕಷ್ಟದಲ್ಲಿ ಸಹಾಯ ಮಾಡಿದವರನ್ನು ಎಂದೂ ಮರೆಯಬಾರದು. ಉತ್ತಮ ತಾಯಿ ನೂರು ಜನ ಶಿಕ್ಷಕರಿಗೆ ಸಮ. ಗುರು ಶಿಷ್ಯರ ಸಂಬಂಧ ಉತ್ತಮವಾಗಿರಬೇಕು ಎಂದು ಹೊರಟ್ಟಿ ಹೇಳಿದರು.

ಓದಿ ಉನ್ನತ ಮಟ್ಟದ ಹುದ್ದೆ ಅಲಂಕರಿಸಿದವರು ಇಂದು ತಮ್ಮ ಗುರುಗಳನ್ನು ನೆನೆದು ಓದಿದ ಶಾಲೆಗೆ ಅಕ್ಷರ ತೋರಣ ಕಟ್ಟಿದ ಹಳೆಯ ವಿದ್ಯಾರ್ಥಿಗಳ ಕಾರ್ಯ ಅಭಿನಂದನೀಯ ಹಾಗೂ ಅನುಕರಣೀಯವಾಗಿದ್ದು ಎಂದು ಅಭಿಪ್ರಾಯಪಟ್ಟರು.

ಕೃಷಿ ಪ್ರಧಾನವಾದ ಕುಟುಂಬದಲ್ಲಿ ಬೆಳೆದಿದ್ದ ತಾವು 8 ನೇ ತರಗತಿಯಲ್ಲಿರುವಾಗಲೇ ಅನಕ್ಷರಸ್ಥೆಯಾಗಿದ್ದ ತಮ್ಮ ಅಕ್ಕನಿಗೆ ಬಾಲ್ಯವಿವಾಹವಾಗಿದ್ದನ್ನು ನೆನಪಿಸಿಕೊಂಡ ಅವರು, "ಇದು ನನ್ನ ಮನಸ್ಸಿನ ಮೇಲೆ ಗಾಢವಾದ ಪರಿಣಾಮ ಬೀರಿತು. ಮುಂದೆ ನಾನು ಶಿಕ್ಷಣ ಸಚಿವನಾದ ಬಳಿಕ ಹೆಣ್ಣು ಮಕ್ಕಳ ಕಲಿಕೆಗೆ ಹೆಚ್ಚಿನ ಒತ್ತು ನೀಡಿದೆ. ಅಕ್ಕನ ಅನಕ್ಷರತೆಯೇ ಹೆಣ್ಣು ಮಕ್ಕಳ ಕಲಿಕೆಗೆ ಆದ್ಯತೆ ನೀಡಲು ಮೂಲ ಕಾರಣವಾಯ್ತು" ಎಂದು ವಿವರಿಸಿದರು.



ಆಲಮಟ್ಟಿಯ ಸಮುದಾಯ ಭವನದಲ್ಲಿ ಎಂಪಿಎಸ್ ಹಾಗೂ ಎಂಎಚ್‌ಎಂ ಶಾಲೆಯ ಹಳೆಯ ವಿದ್ಯಾರ್ಥಿ ಬಳಗದಿಂದ ಹಮ್ಮಿಕೊಂಡ ಗ್ರಂಥ ಬಿಡುಗಡೆ ಹಾಗೂ ಗುರು ಶಿಷ್ಯರ ಮಹಾಸಂಗಮ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಗ್ರಂಥ ಬಿಡುಗಡೆಗೊಳಿಸಿದರು.

ಮುಂಡರಗಿ ತೋಂಟದಾರ್ಯಮಠದ ನಿಜಗುಣಪ್ರಭು ತೋಂಟದಾರ್ಯ ಶ್ರೀಗಳು ಮಾತನಾಡಿ, ಬಸವಣ್ಣನವರು ಸಾವಿರ ವರ್ಷಗಳ ಹಿಂದೆ ಅಕ್ಷರದ ಕ್ರಾಂತಿ ಮಾಡಿದರು. ಹೀಗಾಗಿ ಕೆಳವರ್ಗದ ಜನರೂ ಕೂಡ ವಚನ ಬರೆಯುಂತಾಯಿತು ಎಂದರು.

ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮೋಹನರಾಜ್ ಕೆ.ಪಿ. ಮಾತನಾಡಿ ಸಾಮಾನ್ಯವಾಗಿ ಒಂದೊಂದು ಬ್ಯಾಚಿನವರು ಗುರುವಂದನ ಮಾಡುವುದನ್ನು ಕಾಣುತ್ತೇವೆ, ಆದರೆ 60 ವರ್ಷಗಳ ಎಲ್ಲ ಬ್ಯಾಚಿನವರು ಸೇರಿ ಗುರುಶಿಷ್ಯರ ಮಹಾಸಂಗಮ ಬಹುಶಃ ಕರ್ನಾಟಕದಲ್ಲಿ ಎಲ್ಲಿಯೂ ನಡೆದಿಲ್ಲ ಎಂದರು.

ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ವಿಜಯಪುರ ಡಿಸಿಸಿ ಬ್ಯಾಂಕ್ ನಿರ್ದೇಶಕ ಸಂಯುಕ್ತ ಪಾಟೀಲ, ಮಾಜಿ ಸಚಿವರಾದ ಎಸ್. ಕೆ. ಬೆಳ್ಳುಬ್ಬಿ, ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪುರ, ಬೇಲೂರಿನ ಗುರುಬಸವ ಮಠದ ಮಹಾಂತ ಸ್ವಾಮೀಜಿ, ಗದಗದ ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ, ಸದಾಶಿವ ದಳವಾಯಿ ಸೇರಿದಂತೆ ಇತರರಿದ್ದರು. ಎಂಪಿಎಸ್ ಮತ್ತು ಎಂಎಚ್‌ಎಂ ಪ್ರೌಢಶಾಲೆಯ ಸುಮಾರು 70 ನಿವೃತ್ತ ಹಾಗೂ ಹಾಲಿ ಗುರುಗಳು-ಗುರುಮಾತೆಯರನ್ನು ಸನ್ಮಾನಿಸಲಾಯಿತು. ಚಂದ್ರಶೇಖರ ನುಗ್ಲಿ, ಸಂಗಮೇಶ ಮೇಗಾನಕಾಯಿ, ವಿಠ್ಠಲ್ ಪಾಟೀಲ್, ಸಾವಿತ್ರಿ ಹಿರೆಗೊಂಡ, ಶೈಲಶ್ರೀ ಜೋಶಿ, ಸರೋಜಾ ಪೂಜಾರಿ, ಸಂಗಮೇಶ್ ಚನ್ನಿಗಾವಿ ಮುಂತಾದವರು ಉಪಸ್ಥಿತರಿದ್ದರು.

ಉದ್ಘಾಟನಾ ಕಾರ್ಯಕ್ರಮದ ನಂತರದಲ್ಲಿ ಮಧ್ಯಾಹ್ನ "ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ?" ಎಂಬ ವಿಷಯವಾಗಿ ಸದ್ಯದ ವಿದ್ಯಾರ್ಥಿಗಳೊಂದಿಗೆ ಹಳೆಯ ಸಾಧಕ ವಿದ್ಯಾರ್ಥಿಗಳಾದ ಬೆಂಗಳೂರಿನ ಜಯದೇವ ಹೃದ್ರೋಗ ಆಸ್ಪತ್ರೆಯ ಪ್ರಾಧ್ಯಾಪಕ ಡಾ.ಅರುಣ ಉಳ್ಳಾಗಡ್ಡಿ, ಹಿರಿಯ ಕೆ. ಎ. ಎಸ್. ಅಧಿಕಾರಿ ಮಮತಾ ಹೊಸಗೌಡರ, ಪೊಲೀಸ್ ಇನ್ಸ್‌ಪೆಕ್ಟರ್ ಗಳಾದ ರಮೇಶ ರೊಟ್ಟಿ, ಸಚಿನ ಚಲವಾದಿ, ಸಂಗಮೇಶ ದಿಡಗಿನಾಳ, ಪುಣೆಯ ಚಾರ್ಟರ್ಡ್ ಅಕೌಂಟೆಂಟ್ ವಾಣಿಶ್ರೀ ಅಮರಗೊಂಡ, ಸರಕಾರಿ ಅಭಿಯೋಜಕಿ ಗೀತಾ ಹೊಸಗಾಣಿಗೇರ, ಆರ್ಕಿಟೆಕ್ಟ್ ಸತೀಶ್ ನಡುವಿನಮನಿ, ಸಂವಾದ ನಡೆಸಿದರು.